## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2013-14ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದ 45 ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳನ್ನು ಸಿಬ್ಬಂದಿಗಳ ಹುದ್ದೆಯೊಂದಿಗೆ ಮಂಜೂರು ಮಾಡುವ ಬಗ್ಗೆ

ಓದಲಾಗಿದೆ:- ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇವರ ಪತ್ರ ದಿನಾಂಕ:20-07-2015.

******

**ಪ್ರಸ್ತಾವನೆ:-**

2013-14ನೇ ಸಾಲಿನ ಆಯವ್ಯಯದಲ್ಲಿ ಮುಂಬರುವ 5 ವರ್ಷಗಳಲ್ಲಿ ಉತ್ತಮ ಗುಣಮಟ್ಟದ ಎಲ್ಲಾ ಸೌಲಭ್ಯಗಳನ್ನು ಹೊಂದಿದ ವಸತಿ ಶಾಲೆಗಳನ್ನು ಹೋಬಳಿಗೆ ಒಂದರಂತೆ ಪ್ರಾರಂಭಿಸಲಾಗುವುದು. 30 ಪರಿಶಿಷ್ಟ ಜಾತಿ ವಸತಿ ಶಾಲೆಗಳು ಮತ್ತು 15 ವಸತಿ ಶಾಲೆಗಳು ಪರಿಶಿಷ್ಟ ವರ್ಗದವರಿಗೆ ಪ್ರಸಕ್ತ ಸಾಲಿನಲ್ಲಿ ಪ್ರಾರಂಭಿಸಲಾಗುವುದೆಂದು ಘೋಷಿಸಲಾಗಿದೆ.

ಆಯವ್ಯಯದ ಘೋಷಣೆಯಂತೆ ಮತ್ತು ವಸತಿ ಶಾಲೆಗಳು ಇಲ್ಲದೇ ಇರುವ ಹೋಬಳಿಗಳಿಗೆ ವಸತಿ ಶಾಲೆಗಳನ್ನು ಮಂಜೂರು ಮಾಡುವ ಬಗ್ಗೆ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಕಇ 340 ಮೊದೇಶಾ 2015, ಬೆಂಗಳೂರು, ದಿನಾಂಕ: 11 -08-2016**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ 30 ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ 15 ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳನ್ನು ಅನುಬಂಧ-1 ರಲ್ಲಿದ್ದಂತೆ ಮಂಜೂರು ಮಾಡಲಾಗಿದೆ.

ಸದರಿ 45 ವಸತಿ ಶಾಲೆಗಳಿಗೆ ಅವಶ್ಯವಿರುವ ಪ್ರತಿ ಶಾಲೆಗೆ 20 ರಂತೆ ಬೋಧಕರು ಮತ್ತು ಬೋಧಕೇತರ ಹುದ್ದೆಗಳನ್ನು ಅನುಬಂಧ-2ರಂತೆ ಪ್ರತಿ ಶಾಲೆಗೆ 20 ಹುದ್ದೆಗಳಂತೆ ಒಟ್ಟು 900 ಹುದ್ದೆಗಳನ್ನು ಮಂಜೂರು ಮಾಡಲಾಗಿದೆ. ಈ ಹುದ್ದೆಗಳನ್ನು ಅನುಬಂಧ-2ರಂತೆ ವೃಂದ ಮತ್ತು ನೇಮಕಾತಿ ನಿಯಮಗಳಂತೆ ನೇರ ನೇಮಕಾತಿ/ಹೊರ ಸಂಪನ್ಮೂಲದ ಮೂಲಕ ಭರ್ತಿ ಮಾಡಲು ಸಹ ಮಂಜೂರಾತಿ ನೀಡಲಾಗಿದೆ. ಸದರಿ ವಸತಿ ಶಾಲೆಗಳ ಕಟ್ಟಡಗಳನ್ನು ಕೈಗೆತ್ತಿಕೊಳ್ಳಲು 8 ಎಕರೆಯಿಂದ 10 ಎಕರೆ ಜಮೀನನ್ನು ಪಡೆದುಕೊಳ್ಳಲು ಸಹ ಕ್ರಮ ಜರುಗಿಸಲು ಆದೇಶಿಸಲಾಗಿದೆ.

ಸದರಿ ವಸತಿ ಶಾಲೆಗಳಿಗೆ ನಿವೇಶನ ಪಡೆದು ಅವಶ್ಯಕವಿರುವ ಕಟ್ಟಡ ಮತ್ತು ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಿದ ನಂತರವೇ ಮಕ್ಕಳನ್ನು ನಿಯಮಗಳಂತೆ ದಾಖಲಿಸಿಕೊಂಡು ತರಗತಿಗಳನ್ನು ಪ್ರಾರಂಭಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಎಫ್‌ಡಿ 1064 ವೆಚ್ಚ-3/2015. ದಿನಾಂಕ: 22-02-2016ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಎನ್.ಸುಮತಿ) 11-8-2016
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ,

1. ಮಹಾಲೇಖಪಾಲರು, (ಎ ಮತ್ತು ಇ)(ಲೆಕ್ಕ ಪರಿಶೋಧನೆ-1) (ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.

2. ಉಪಾಧ್ಯಕ್ಷರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಮತ್ತು ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
4. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು
5. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು
6. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ. ವಿಕಾಸಸೌಧ. ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

*****